ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

36

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 26/3/21

## ವಿಧಾನಸಭೆ ಚುನಾವಣೆ ಪ್ರಚಾರಕ್ಕೆ ಅನುವು

# ಸಂಸತ್ ಅಧಿವೇಶನ ಮುಕ್ತಾಯ

ಪ್ರ.ವಾ. 26-3-21

ನವದೆಹಲಿ: ಅಸ್ಸಾಂ, ಕೇರಳ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಪುದುಚೇರಿ ವಿಧಾನಸಭೆಗಳಿಗೆ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಸಂಸತ್‌ನ ಬಜೆಟ್ ಅಧಿವೇಶನವು ನಿಗದಿಪಡಿಸಿದ ಅವಧಿಗೆ ಮುನ್ನವೇ ಗುರುವಾರ ಮುಕ್ತಾಯಗೊಂಡಿತು.

ರಾಜಕೀಯ ಮುಖಂಡರಿಗೆ ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳಲು ಅನುವು ಮಾಡಿಕೊಡುವ ನಿಟ್ಟಿನಲ್ಲಿ, ಏಪ್ರಿಲ್ 8ರವರೆಗೆ ನಿಗದಿಯಾಗಿದ್ದ ಅಧಿವೇಶನವನ್ನು ನಿರೀಕ್ಷೆಯಂತೆಯೇ ಅನಿರ್ದಿಷ್ಟ ಅವಧಿಗೆ ಮುಂದೂಡಲಾಯಿತು.

ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಮತ್ತಿತರ ಪ್ರಮುಖರು ಅಧಿವೇಶನದ ಕೊನೆಯ ದಿನದ ಕಲಾಪದಲ್ಲಿ ಪಾಲ್ಗೊಂಡಿದ್ದರು.

ಜನವರಿ 23ರಂದು ಪ್ರಾರಂಭವಾದ ಬಜೆಟ್ ಅಧಿವೇಶನ 24 ದಿನ ನಡೆದಿದ್ದರೂ, ವಿವಿಧ ವಿಷಯಗಳ ಕುರಿತ ಚರ್ಚೆಗೆ ಅವಕಾಶ ದೊರೆಯದ ಕಾರಣ ಆಡಳಿತಾರೂಢ ಎನ್‌ಡಿಎ ಸರ್ಕಾರ ವಿರೋಧ ಪಕ್ಷಗಳ ಟೀಕೆ ಎದುರಿಸಬೇಕಾಯಿತು.

ತೈಲ ಮತ್ತು ಅಡುಗೆ ಅನಿಲದ ಬೆಲೆ ಹೆಚ್ಚಳ ಹಾಗೂ ಕೃಷಿ ಕಾಯ್ದೆ ತಿದ್ದುಪಡಿ ಕುರಿತಂತೆ ವಿಪಕ್ಷಗಳಿಗೆ ಸಮಗ್ರ ಚರ್ಚೆಗೆ ಅವಕಾಶ ನೀಡದ್ದರಿಂದ ಮಾರ್ಚ್ 8ರಂದು ಪ್ರಾರಂಭವಾದ ಬಜೆಟ್ ಅಧಿವೇಶನದ ದ್ವಿತಿಯ ಭಾಗದ ಮೊದಲ ಮೂರು ದಿನಗಳ ಕಲಾಪವು ಪ್ರತಿಭಟನೆಗಳಿಗೆ ಸಾಕ್ಷಿಯಾಯಿತು.

ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಕೊರೊನಾ ಪೀಡಿತರಾಗಿರುವ ಕಾರಣ ಅಧಿವೇಶನದ ಕೊನೆಯ ದಿನ ಸ್ಪೀಕರ್ ಸ್ಥಾನದಲ್ಲಿ ಆಸೀನರಾಗಿದ್ದ ಬಿಜು ಜನತಾದಳದ (ಬಿಜೆಡಿ) ಹಿರಿಯ ಸದಸ್ಯ ಭರ್ತೃಹರಿ ಮೆಹತಾಬ್ ಸಮಾರೋಪ ಭಾಷಣ ಮಾಡಿದರು.

'ಬಜೆಟ್ ಅಧಿವೇಶನದ ಸಂದರ್ಭ ಲೋಕಸಭೆಯಲ್ಲಿ 24 ದಿನ, 134 ಗಂಟೆಗಳ ಕಾಲ ಕಲಾಪ ನಡೆದಿದ್ದು, ವಿವಿಧ ವಿಷಯಗಳ ಮೇಲೆ ಚರ್ಚೆ ನಡೆಸಿ, ಮಹತ್ವದ 18 ಮಸೂದೆಗಳನ್ನು ಅಂಗೀಕರಿಸಲಾಗಿದೆ. ರಾಜ್ಯಸಭೆಯಲ್ಲಿ 23 ದಿನ, 104 ಗಂಟೆ 23 ನಿಮಿಷ ಕಲಾಪ ನಡೆದಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಸುದ್ದಿಗಾರರಿಗೆ ತಿಳಿಸಿದರು.

'ಸಂಸತ್ ಸದಸ್ಯತ್ವದ 17 ವರ್ಷಗಳ ನನ್ನ ಅನುಭವದಲ್ಲಿ ಇದೇ ಮೊದಲ ಬಾರಿಗೆ ವಿರೋಧ ಪಕ್ಷಗಳ ಒಂದೂ ಬೇಡಿಕೆಯತ್ತ ಅಧ್ಯಕ್ಷರು ಗಮನ ಹರಿಸಲಿಲ್ಲ. ಯಾವುದೇ ಚರ್ಚೆಗೂ ನಮಗೆ ಅವಕಾಶ ದೊರೆಯಲಿಲ್ಲ' ಎಂದು ರಾಜ್ಯಸಭೆ ಸದಸ್ಯ, ಕಾಂಗ್ರೆಸ್‌ನ ಜೈರಾಮ್ ರಮೇಶ್ ಸುದ್ದಿಗಾರರೆದುರು ದೂರಿದರು.